ವಿಸ್ತರಿಸುವಂತೆ ಸಕ್ಕರೆ ಕಾರ್ಖಾನೆಗಳಿಗೆ ಸೂಚನೆ ನೀಡಲಾಗಿದೆ. ಸರ್ಕಾರವು ಹೆಚ್ಚುವರಿ ಕಬ್ಬಿನ ಸಮಸ್ಯೆಯನ್ನು ತೀವ್ರವಾಗಿ ಪರಿಗಣಿಸಿ ಕ್ರಮವಿಟ್ಟಿದೆ.

ಮೈಸೂರು ನಗರದ ಮಂಡಿಮೊಹಲ್ಲ ಲಷ್ಕರ್ ಮೊಹಲ್ಲಗಳಲ್ಲಿ ಸಮರ್ಪಕ ನೀರಿನ ವ್ಯವಸ್ಥೆ

252-ಶ್ರೀ ಹೆಚ್.ಎಸ್. ಶಂಕರಲಿಂಗೇಗೌಡ (ಚಾಮರಾಜ) : ಮಾನ್ಯ ನಗರಾಭಿವೃದ್ಧಿ ಮತ್ತು ಕಾಡಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಮೈಸೂರು ನಗರದ ಮಂಡಿಮೊಹಲ್ಲಾ ಮತ್ತು ಲಷ್ಕರ್ ಮೊಹಲ್ಲಾಗಳಿಗೆ ಕುಡಿಯುವ ನೀರಿನ ಸಮರ್ಪಕ ವಿತರಣಾ ವ್ಯವಸ್ಥೆಗಾಗಿ ಹಾಲಿ ಈಗ ಇರುವ ಸಣ್ಣ ವಿನ್ಯಾಸದ ಪೈಪ್‌ಲೈನನ್ನು ತೆಗೆದು ದೊಡ್ಡ ವಿನ್ಯಾಸವಿರುವ ಪೈಪ್ ಲೈನನ್ನು ಜೋಡಿಸುವ ಕಾಮಗಾರಿಯು ಯಾವ ಹಂತದಲ್ಲಿದೆ?

ಆ) ಅಂದಾಜು ವೆಚ್ಚ ಎಷ್ಟು?

ಇ) ಈ ಕಾಮಗಾರಿಗಳನ್ನು ಎಂದು ಪೂರ್ಣಗೊಳಿಸಲಾಗುವುದು?

ಶ್ರೀ ವೈಜನಾಥ್ ಪಾಟೀಲ್ (ನಗರಾಭಿವೃದ್ಧಿ ಮತ್ತು ಕಾಡಾ ಸಚಿವರು) :

ಅ) ಮೈಸೂರಿನ ಮಂಡಿಮೊಹಲ್ಲಾ ಮತ್ತು ಲಷ್ಕರ್ ಮೊಹಲ್ಲಾದಲ್ಲಿರುವ ವಿತರಣಾ ವ್ಯವಸ್ಥೆಯ ನವೀಕರಣ ಕಾಮಗಾರಿಗೆ 89.70 ಲಕ್ಷ ರೂ.ಗಳ ಅಂದಾಜಿಗೆ ಅನುಮೋದನೆ ನೀಡಿದ್ದು ಈ ಕೆಲಸವನ್ನು ಟೆಂಡರ್ ಆಧಾರದ ಮೇಲೆ ವಹಿಸಲಾಗಿದ್ದು ಈ ಕೆಲಸವು ಪ್ರಗತಿಯಲ್ಲಿರುತ್ತದೆ.

ಆ) ಈ ಕಾಮಗಾರಿಯ ಅಂದಾಜು ವೆಚ್ಚ 89.70 ಲಕ್ಷ ರೂ.ಗಳು

ಇ) ಈ ಕಾಮಗಾರಿಯನ್ನು ಅಕ್ಟೋಬರ್ 96ರ ವೇಳೆಗೆ ಮುಗಿಸಲು ಉದ್ದೇಶಿಸಲಾಗಿದೆ.

ಹಿಂದುಳಿದ ವರ್ಗಗಳ ಹಾಗೂ ಅಲ್ಪಸಂಖ್ಯಾತರ ವಿದ್ಯಾರ್ಥಿ ನಿಲಯಗಳ ಬಗ್ಗೆ

253 - ಶ್ರೀ ಹೆಚ್.ಎಸ್. ಶಂಕರಲಿಂಗೇಗೌಡ (ಚಾಮರಾಜ) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ರಾಜ್ಯದಲ್ಲಿನ ಹಿಂದುಳಿದ ವರ್ಗದವರಿಗಾಗಿ ಹಾಗೂ ಅಲ್ಪಸಂಖ್ಯಾತರಿಗೆ ಇರುವ ವಿದ್ಯಾರ್ಥಿ ನಿಲಯಗಳ ಸಂಖ್ಯೆ ಎಷ್ಟು?

ಆ) ಮೈಸೂರಿನಲ್ಲಿ ಈ ವರ್ಗಗಳಿಗೆ ಇರುವ ವಿದ್ಯಾರ್ಥಿನಿಲಯಗಳ ಸಂಖ್ಯೆ ಎಷ್ಟು?

ಇ) ಈ ವರ್ಗಗಳಿಗಾಗಿ ಏರುತ್ತಿರುವ ಜನಸಂಖ್ಯೆಗನುಗುಣವಾಗಿ ಮೈಸೂರಿಗೆ ಇನ್ನೊಂದು ವಿದ್ಯಾರ್ಥಿನಿಲಯವನ್ನು ಮಂಜೂರು ಮಾಡುವ ಬಗ್ಗೆ ತೀರ್ಮಾನವಾಗಿದೆಯೇ?

ಈ) ಇಲ್ಲದಿದ್ದಲ್ಲಿ ಬರುವ ಶೈಕ್ಷಣಿಕ ವರ್ಷದಲ್ಲಾದರೂ ಮಂಜೂರು ಮಾಡಲಾಗುವುದೇ?

ಶ್ರೀ ರಮೇಶ್ ಸಿ. ಜಿಗಜಿಣಗಿ (ಸಮಾಜ ಕಲ್ಯಾಣ ಸಚಿವರು) :

ಅ) 943 ಮೆಟ್ರಿಕ್ ಪೂರ್ವ ಹಾಗೂ 133 ಮೆಟ್ರಿಕ್ ನಂತರದ ಬಾಲಕ ಬಾಲಕಿಯರ ವಿದ್ಯಾರ್ಥಿನಿಲಯವು ಇರುತ್ತವೆ.

ಆ) ಮೈಸೂರು ನಗರದಲ್ಲಿ 6 ವಿದ್ಯಾರ್ಥಿನಿಲಯಗಳು ಇರುತ್ತವೆ. ಇವುಗಳಲ್ಲಿ 2 ಮೆಟ್ರಿಕ್ ಪೂರ್ವ, ಹಾಗೂ 2 ಮೆಟ್ರಿಕ್ ನಂತರದ ಬಾಲಕರ ವಿದ್ಯಾರ್ಥಿನಿಲಯಗಳು ಮತ್ತು 2 ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿನಿಲಯಗಳು.